# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 300
ಸದಸ್ಯರ ಹೆಸರು : ಶ್ರೀ ಭೀಮರಾವ್ ಬಸವರಾಜ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 11–12–2024
ಉತ್ತರಿಸುವ ಸಚಿವರು : ಲೋಕೋಪಯೋಗಿ ಸಚಿವರು

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೆಂಗಳೂರು–ಬೀದರ್ ನಡುವೆ ಗ್ರೀನ್ ಫೀಲ್ಡ್ ಎಕ್ಸ್‌ಪ್ರೆಸ್ ನಿರ್ಮಾಣ ಕಾಮಗಾರಿ ಕುರಿತು ಸರ್ಕಾರ ಕೈಗೊಂಡ ಕ್ರಮವೇನು; | ಕಲ್ಯಾಣ ಕರ್ನಾಟಕ ಭಾಗದ ಸಾಮಾಜಿಕ ಆರ್ಥಿಕ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಬೆಂಗಳೂರು–ಬೀದರ್ ನಡುವೆ ಆರ್ಥಿಕ ಕಾರಿಡಾರ್ ಹೆದ್ದಾರಿಯನ್ನು ನಿರ್ಮಿಸುವ ಸಲುವಾಗಿ ವಿವರವಾದ Pre-Feasibility Report ತಯಾರಿಸಲು ತಾಂತ್ರಿಕ ಸಮಾಲೋಚಕರನ್ನು ನೇಮಿಸಲು ಲೆಕ್ಕ ಶೀರ್ಷಿಕೆ 3054–ರಾಜ್ಯ ಹೆದ್ದಾರಿ ನಿರ್ವಹಣೆ ಅಡಿಯಲ್ಲಿ ರೂ:470.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ. |
| ಆ) | ಕಲ್ಯಾಣ ಕರ್ನಾಟಕ ಭಾಗದ ಸಾಮಾಜಿಕ ಆರ್ಥಿಕ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಅಂತಿಮ ವಿನ್ಯಾಸ ತಯಾರು ಮಾಡಲಾಗಿದೆಯೇ; ಮಾಡಿದ್ದಲ್ಲಿ, ಮಾಹಿತಿ ನೀಡುವುದು. | |
| ಇ) | ಈ ರಸ್ತೆಯು ಸುಮಾರು 600 ಕಿ.ಮೀ. ಉದ್ದ ಇದ್ದು, ಪ್ರಮುಖ ಕೈಗಾರಿಕಾ ಕಾರಿಡಾರ್‌ವಾಗಲಿದ್ದು, ಜಿಲ್ಲೆಯ ವಾಣಿಜ್ಯ ಕೇಂದ್ರಗಳನ್ನು ಸಂಪರ್ಕಿಸುವ ಜೊತೆಗೆ ಜನರ ಸುಲಭ ಪ್ರಯಾಣಕ್ಕೆ ಅನುಕೂಲ ಮಾಡಿಕೊಡಲು ಸರ್ಕಾರ ಯಾವ ಕಾಲಮಿತಿಯೊಳಗೆ ಕಾಮಗಾರಿ ಪ್ರಾರಂಭ ಮಾಡಲಾಗುವುದು? (ಮಾಹಿತಿ ನೀಡುವುದು) | ಈ ಸಂಬಂಧ ಟೆಂಡರ್ ಅಹ್ವಾನಿಸಲಾಗಿದ್ದು, ತಾಂತ್ರಿಕ ಬಿಡ್ ಮೌಲ್ಯ ಮಾಪನ ಹಂತದಲ್ಲಿದೆ. ಟೆಂಡರ ಕೈಗೊಳ್ಳುವ ಬಗ್ಗೆ ಕ್ರಮ ವಹಿಸಲಾಗುವುದು. |

ಸಂಖ್ಯೆ: ಲೋಇ 144 ಸಿಐಎಸ್ 2024 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು